ಶಿವಮೊಗ್ಗ ನಗರದ ರಾಷ್ಟ್ರೀಯ ಹಾಗೂ ಅಂತರ ರಾಷ್ಟ್ರೀಯ ಕ್ರೀಡಾಪಟುಗಳಿಗೆ ನಿವೇಶನ

1875 (1707) ಶ್ರೀ ಹೆಚ್.ಎಂ. ಚಂದ್ರಶೇಖರಪ್ಪ (ಶಿವಮೊಗ್ಗ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಶಿವಮೊಗ್ಗ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಶಿವಮೊಗ್ಗ ನಗರದ ರಾಷ್ಟ್ರೀಯ ಹಾಗೂ ಅಂತರ್‌ರಾಷ್ಟ್ರೀಯ ಖ್ಯಾತಿಗಳಿಸಿದ ಕ್ರೀಡಾಪಟುಗಳಿಗೆ ಉಚಿತವಾಗಿ: ರಿಯಾಯತಿ ದರದಲ್ಲಿ ವಿವೇಶನ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)?

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು)

ಅ. ರಾಷ್ಟ್ರೀಯ ಹಾಗೂ ಅಂತರ್‌ರಾಷ್ಟ್ರೀಯ ಖ್ಯಾತಿ ಗಳಿಸಿದ ಕ್ರೀಡಾಪಟುಗಳಿಗೆ ಉಚಿತವಾಗಿ:ರಿಯಾಯತಿ ದರದಲ್ಲಿ ನಿವೇಶನವನ್ನು ಮಂಜೂರು ಮಾಡುವ ಪ್ರಸ್ತಾವನೆ ಯಾವುದು ಇರುವುದಿಲ್ಲ.

ರಾಜ್ಯದ ನಗರ ಪ್ರದೇಶಗಳಲ್ಲಿ ಹಂದಿಗಳ ಸ್ಥಳಾಂತರ

1876 (1708) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ (ಶಿವಮೊಗ್ಗ): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ರಾಜ್ಯದ ನಗರ ಪ್ರದೇಶಗಳಲ್ಲಿ ವಾಸ ಮಾಡುತ್ತಿರುವ ಹಂದಿಗಳ ಸ್ಥಳಾಂತರದ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ;

ಆ. ನಗರ ಪ್ರದೇಶದ ಹೊರಗಡೆ ಹಂದಿ ಸಾಕಾಣಿಕೆ ಉದ್ದೇಶಕ್ಕಾಗಿ ವಿಶೇಷ ಘಟಕ ಯೋಜನೆಯಡಿ ಉಚಿತ ಜಮೀನು ನೀಡುವ ಯೋಜನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು);

ಇ. ಶಿವಮೊಗ್ಗ ನಗರಸಭೆ ವತಿಯಿಂದ ಈವರೆಗೆ ಎಷ್ಟು ಹಂದಿಗಳನ್ನು ಸ್ಥಳಾಂತರ ಮಾಡಲಾಗಿರುತ್ತದೆಯೇ; ಇದಕ್ಕೆ ವ್ಯಯಿಸಿರುವ ವೆಚ್ಚವೆಷ್ಟು; (ವಿವರ ನೀಡುವುದು)

ಶ್ರೀ ಡಿ.ಕೆ. ಶಿವಕುಮಾರ್ (ನಗರಾಭಿವೃದ್ಧಿ ಸಚಿವರು)

ಅ. ನಗರಸಭೆ ವ್ಯಾಪ್ತಿಯಲ್ಲಿರುವ ಅಲೆಮಾರಿ ಹಂದಿಗಳನ್ನು ಖಾಸಗೀ ಗುತ್ತಿಗೆದಾರರಿಂದ ಹಿಡಿಸಿ, ನಗರದ ಹೊರವಲಯಕ್ಕೆ ಸಾಗಿಸುವ ಕ್ರಮ ಕೈಗೊಳ್ಳಲಾಗುತ್ತಿದೆ.

ಆ. ಇಲ್ಲ

ಇ. ಈವರೆಗೆ ಒಟ್ಟು 2414 ಹಂದಿಗಳ ಸ್ಥಳಾಂತರ ಮಾಡಲಾಗಿದೆ. ಇದಕ್ಕೆ ಒಟ್ಟು ರೂ.1,11,485.00 ಗಳನ್ನು ವೆಚ್ಚ ಮಾಡಲಾಗಿದೆ.

ಶಿವಮೊಗ್ಗ ನಗರದಲ್ಲಿ ಹೊಸ ಪೊಲೀಸ್ ಠಾಣೆ ಪ್ರಾರಂಭ

1877 (2493) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ (ಶಿವಮೊಗ್ಗ): ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಶಿವಮೊಗ್ಗ ನಗರದಲ್ಲಿ ಜನ ಸಂಖ್ಯೆಗೆ ಅನುಗುಣವಾಗಿ ಪೊಲೀಸ್ ಸಿಬ್ಬಂದಿ ಸೇವೆಯಲ್ಲಿ ಇದ್ದಾರೆಯೆ: